# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಳ್ಳಾರಿ ಜಿಲ್ಲೆಯ (ಪ್ರಸ್ತುತ ವಿಜಯನಗರ ಜಿಲ್ಲೆ) ಹರಪನಹಳ್ಳಿ ತಾಲ್ಲೂಕಿನ ಹಾರಕನಾಳು ಮತ್ತು ಇತರೆ 29 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/02/ಗ್ರಾನೀಸ(5)2010, ಬೆಂಗಳೂರು ದಿನಾಂಕ:26.06.2010.
2. ದಿನಾಂಕ:04.01.2022ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variation & EOT ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರ ಇ–ಆಫೀಸ್ ಕಡತ ಸಂ:RDWSD-TECHOCN/48/2022

---

**ಪೀಠಿಕೆ:**

ಬಳ್ಳಾರಿ ಜಿಲ್ಲೆಯ (ಪ್ರಸ್ತುತ ವಿಜಯನಗರ ಜಿಲ್ಲೆ) ಹರಪನಹಳ್ಳಿ ತಾಲ್ಲೂಕಿನ ಹಾರಕನಾಳು ಮತ್ತು ಇತರೆ 29 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ **ರೂ.11.12ಕೋಟಿಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು KTPP ನಿಯಮಾವಳಿಯನ್ವಯ ಟೆಂಡರ್ ಆಹ್ವಾನಿಸಲಾಗಿ ಕನಿಷ್ಠ ದರ ನಮೂದಿಸಿದ ಗುತ್ತಿಗೆದಾರರ ದರಗಳನ್ನು ಪರಿಗಣಿಸಿ, ಟೆಂಡರ್‌ನ್ನು ಪರಿಶೀಲಿಸಲಾಗಿ, ಸದರಿ ಕಾಮಗಾರಿಯ ಟೆಂಡರ್‌ನ್ನು ಚಾಲ್ತಿ CSR ದರಗಳಿಗೆ ಹೋಲಿಸಿದಾಗ, ಕಾಮಗಾರಿಯ ವ್ಯಾಪ್ತಿಯಲ್ಲಿ ಆದ ಬದಲಾವಣೆಗಳಿಂದ ಪರಿಷ್ಕೃತ ಅಂದಾಜು ಪಟ್ಟಿಯನ್ನು ತಯಾರಿಸಲಾಗಿರುತ್ತದೆ. ಮೇಲೆ(2)ರಲ್ಲಿ ಓದಲಾದ Variation & EOT ಸಭೆಯಲ್ಲಿ ಮಂಡಿಸಲಾಗಿ, ಸದರಿ ಯೋಜನೆಗಳ ವಿವರಗಳನ್ನು ಪರಿಶೀಲಿಸಿ ಸಭೆಯ ಅನುಮತಿಯಂತೆ **ರೂ.3481.20ಲಕ್ಷ** ಪರಿಷ್ಕೃತ ಅಂದಾಜು ಮೊತ್ತಕ್ಕೆ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮೇಲೆ(3)ರಲ್ಲಿ ಓದಲಾದ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರುರವರ ಕಡತದಲ್ಲಿ ಕೋರಿರುತ್ತಾರೆ.

ಸದರಿ ಯೋಜನೆಯಲ್ಲಿ ಪರಿಗಣಿಸಿರುವ ಪೈಪ್‌ಲೈನ್ ಮತ್ತು ಟೆಲಿಫೋನ್ ಕೇಬಲ್‌ಗಳನ್ನು ಅಳವಡಿಸಲು, ಜಲ ಸಂಗ್ರಹಾರಗಳ ಸ್ಥಳಗಳ ಬದಲಾಗಿರುವುದರಿಂದ ವಿವಿಧ ಗಾತ್ರಗಳ ಮತ್ತು ವರ್ಗಗಳ ಪೈಪ್‌ಲೈನ್‌ಗಳ ಪ್ರಮಾಣವು ಹೆಚ್ಚಾಗಿರುತ್ತದೆ. WTP ಯಲ್ಲಿನ Vacuum Pump, ಜಾಕ್‌ವೆಲ್‌ಗೆ ಅಪ್ರೋಚ್ ರೋಡ್ ಅನ್ನು ಒದಗಿಸುವುದು, Rapid Sand Filter House ನಲ್ಲಿ Vitrified Glazed Tilesಗಳನ್ನು ಮತ್ತು ನಾಲಾ ಕ್ರಾಸಿಂಗ್‌ಗಳಿಗೆ GI ಪೈಪ್‌ಗಳನ್ನು ಅಳವಡಿಸುವುದು ಈ ಎಲ್ಲಾ ಅಂಶಗಳನ್ನು ಒಳಗೊಂಡಂತೆ ಪ್ರಸ್ತುತ ದರಗಳಿಗೆ ಹೋಲಿಸಿದಾಗ ಯೋಜನೆಯ ಮೊತ್ತವು **ರೂ.3481.20ಲಕ್ಷಗಳಿಗೆ** ಪರಿಷ್ಕೃತವಾಗಿರುತ್ತದೆ.

ಚಾಲ್ತಿ ಪಾರದರ್ಶಕ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ವಿಜಯನಗರ ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 399 ಗ್ರಾನೀಸ(4)2022 ಬೆಂಗಳೂರು, ದಿನಾಂಕ:04.08.2022.** 1282

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಬಳ್ಳಾರಿ ಜಿಲ್ಲೆಯ (ಪ್ರಸ್ತುತ ವಿಜಯನಗರ ಜಿಲ್ಲೆ) ಹರಪನಹಳ್ಳಿ ತಾಲ್ಲೂಕಿನ ಹಾರಕನಾಳು ಮತ್ತು ಇತರೆ 29 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಕಲ್ಪಿಸಲು ಪರಿಷ್ಕೃತ ಅಂದಾಜು ಮೊತ್ತ **ರೂ.3481.20ಲಕ್ಷ (ಮೂರು ಸಾವಿರದ ನಾಲ್ಕು ನೂರ ಎಂಭತ್ತೊಂದು ಲಕ್ಷದ ಇಪ್ಪತ್ತು ಸಾವಿರ ರೂಪಾಯಿಗಳು ಮಾತ್ರ)** ಗಳ ಅಂದಾಜಿನಲ್ಲಿ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಬಾಬ್ತು ಸೇರಿದಂತೆ ಕೇಂದ್ರ ಪುರಸ್ಕೃತ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆಡಳಿತಾತ್ಮಕ ಅನುಮೋದನೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ;**

(ಅ) ಈ ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2022-23ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಉ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಊ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 11 ತಿಂಗಳ 25 ದಿವಸಗೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಋ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ / ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಎ) ಯೋಜನೆ ಅನುಷ್ಠಾನಗೊಂಡು ಗುತ್ತಿಗೆದಾರರ 5 ವರ್ಷಗಳ O&M ನಿರ್ವಹಣಾ ಅವಧಿ ಮುಗಿದ ನಂತರ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

ಏ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

3. ಈ ಆದೇಶವನ್ನು **ಆರ್ಥಿಕ ಇಲಾಖೆ ಟಿಪ್ಪಣಿ ಸಂ:ಆಇ 481 ವೆಚ್ಚ-6/2022, ದಿನಾಂಕ:02.07.2022** ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ನಿರ್ದೇಶಕರು,
ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ವಿಜಯನಗರ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ವಿಜಯನಗರ.**
9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ವಿಜಯನಗರ.**
14. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
15. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
16. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.